# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟ.ದಾಸರಹಳ್ಳಿ, ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.15/ಪಿಆರ್: 05 :2020-21 ದಿನಾಂಕ: 19.12.2020

## ದಾಸರಹಳ್ಳಿ ವಾರ್ಡ್-15ರ ವಾರ್ಡ್ ಸಭೆಯ ನಡವಳಿ

ದಿ.19.12.2020 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಅಶೋಕ್ ಹಿಂದಾ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀಮತಿ.ಅರ್ಚನ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ ವಾರ್ಡ್ ನಂ.15
2. ಶ್ರೀ.ನಾರಾಯಣಸ್ವಾಮಿ, ಸಹಾಯಕ ಕಂದಾಯ ಅಧಿಕಾರಿ, ದಾಸರಹಳ್ಳಿ ಉಪ-ವಿಭಾಗ
3. ಶ್ರಿ.ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
4. ಶ್ರೀಮತಿ.ಚೈತ್ರ, ಕಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
5. ಶ್ರೀ.ಮಂಜುನಾಥ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
6. ಶ್ರೀ.ನಾರಾಯಣಪ್ಪ, ವಿದ್ಯುತ್ ವಿಭಾಗ, ಬಿಬಿಎಂಪಿ
7. ಶ್ರೀಮತಿ.ಸುಲೋಚನಾ, ಘನತ್ಯಾಜ್ಯ ವಿಭಾಗ
8. ಶ್ರೀ.ಆಂಜನಗೌಡ, ಫೀಲ್ಡ್ ಮಾರ್ಷಲ್ ಬಿಬಿಎಂಪಿ
9. ಶ್ರೀಮತಿ.ಶ್ಯಾಮಲಾ, ಲಿಂಕ್ ವರ್ಕರ್ಸ್ ಘನತ್ಯಾಜ್ಯ ವಿಭಾಗ, ಬಿಬಿಎಂಪಿ
10. ಶ್ರೀ.ರಾಜು, ಎಸ್.ಸಿ/ಎಸ್.ಟಿ ದೌರ್ಜನ್ಯ ನಿಯಂತ್ರಣ ಜಾಗೃತಿ ಉಸ್ತುವಾರಿ ಸಮಿತಿ ಸದಸ್ಯರು.

ಶ್ರೀ.ಅಶೋಕ್ ಹಿಂದಾ, ನೋಡೆಲ್ ಅಧಿಕಾರಿ ಹಾಗೂ ಶ್ರೀಮತಿ.ಅರ್ಚನಾ, ಸದಸ್ಯ ಕಾರ್ಯದರ್ಶಿಗಳು, ವಾರ್ಡ್ ನಂ.15, ದಾಸರಹಳ್ಳಿ ರವರುಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ದಿ.05.12.2020 ರಂದು ನಡೆದ ವಾರ್ಡ್ ಕಮಿಟಿ ಸಭೆಯಲ್ಲಿ ವಾರ್ಡ್ ಸಭೆಯ ಸದಸ್ಯರಾದ ಶ್ರೀ.ರಾಜು ರವರು ದಾಸರಹಳ್ಳಿ ವಾರ್ಡ್‌ನ 2019-20ನೇ ಸಾಲಿನಲ್ಲಿ ರೂ.55.00 ಲಕ್ಷಗಳಿಗೆ 5 ಬೋರ್‌ವೆಲ್‌ಗಳನ್ನು ಕೊರೆಯಲು ಅನುಮೋದನೆಗೊಂಡಿರುವುದಾಗಿ ಸದರಿ ಬೋರ್‌ವೆಲ್ ಕೊರೆಯುವ ಕಾರ್ಯವನ್ನು ಕೈಗೊಳ್ಳಲು ನಿಗಧಿತ ಸ್ಥಳಗಳನ್ನು ಆಯ್ಕೆ ಮಾಡಲು ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದ್ದರು ಅದರಂತೆ ಕೆ.ಕೆ ರಸ್ತೆ ಹಳೆ ಮಸೀದಿ ಹತ್ತಿರ, ಭುವನೇಶ್ವರಿನಗರ 5ನೇ ಅಡ್ಡರಸ್ತೆ, ಕೃಷ್ಣೇಗೌಡ ಬಡಾವಣೆ ಶ್ರೀರಂಗ ವಿದ್ಯಾನಿಕೇತನ ಶಾಲೆ ಹತ್ತಿರ, ಕಾಳಾಸ್ತಿನಗರ 1ನೇ ಮುಖ್ಯರಸ್ತೆ, ಪ್ರಶಾಂತನಗರ 6ನೇ ಅಡ್ಡರಸ್ತೆಗಳಲ್ಲಿ ಬೋರ್‌ವೆಲ್ ಕೊರೆಯುವ ಸ್ಥಳಗಳನ್ನು ನಿಗಧಿಪಡಿಸಿರುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

**2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.**

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಅದರಲ್ಲಿ ಒಟ್ಟು ಫಾಸಿಟಿವ್ ಕೇಸ್ 1008, ಒಟ್ಟು ಬಿಡುಗಡೆ 991, ಮರಣ ಹೊಂದಿದದವರು 09 ಹಾಗೂ ಒಟ್ಟು Active case ಪ್ರಕರಣಗಳು 08 Home Isolation ಪ್ರಕರಣಗಳು 02 & Hospitalization ಪ್ರಕರಣಗಳು 06 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಪ್ರತೀ ದಿನ ರಸ್ತೆ ಮುಂಗಟ್ಟುಗಳಲ್ಲಿರುವ ಸಾರ್ವಜನಿಕರುಗಳಿಗೆ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿರುತ್ತದೆ.

ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಅದರಂತೆ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ಕಡ್ಡಾಯವಾಗಿ ನಿಯಮಾನುಸಾರ ರೂ.250.00 ಗಳನ್ನು ದಂಡ ವಿಧಿಸಿ ಕ್ರಮ ಜರುಗಿಸಲಾಗುತ್ತಿದ್ದು, ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುತ್ತಿರುವವರಿಗೆ ಪೋಲೀಸ್ ಸಹಾಯದೊಂದಿಗೆ ಪ್ರತೀ ನಿತ್ಯ ಸುಮಾರು 30 ರಿಂದ 35 ಜನಗಳಿಗೆ ದಂಢವಿಧಿಸಲಾಗುತ್ತಿದೆ ಎಂದು ಸಭೆಯಲ್ಲಿ ಮಾರ್ಷಲ್ ರವರು ವಿವರಿಸಿದರು.

**3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

ಘನತ್ಯಾಜ್ಯ ನಿರ್ವಹಣೆಯ ಸಂಬಂಧ ವಾರ್ಡ್‌ನಲ್ಲಿ 19 ಆಟೋಗಳು, ಒಣ ಕಸ ಸಂಗ್ರಹಣಾ ಆಟೋ-03, ಹಾಗೂ 02 ಕಾಂಪ್ಯಾಕ್ಟರ್ ವಾಹನಗಳು ಘನತ್ಯಾಜ್ಯ ವಿಲೇವಾರಿಗಾಗಿ ನಿಯೋಜಿಸಲಾಗಿರುತ್ತದೆಂದು ವಾರ್ಡ್ ಸಮಿತಿ ಸಭೆಯಲ್ಲಿ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು. ವಾರ್ಡ್ ಸದಸ್ಯರುಗಳು ರಸ್ತೆಯ ಬದಿಯಲ್ಲಿ ಹಾಗೂ ಖಾಲಿ ನಿವೇಶಗಳಲ್ಲಿ ಸಾರ್ವಜನಿಕರು ಕಸವನ್ನು ಹಾಕುತ್ತಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರವರಿಗೆ ದೂರಿದರು ಹಾಗೂ ಇದರ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಿದರು. ಸದರಿ ವಿಷಯದ ಬಗ್ಗೆ ತುರ್ತು ಕ್ರಮವಹಿಸಲು ನೋಡೆಲ್ ಅಧಿಕಾರಿ ರವರು ಆರೋಗ್ಯ ಪರಿವೀಕ್ಷಕರಿಗೆ ಸಭೆಯಲ್ಲಿ ತಿಳಿಸಿದರು.

**4.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.**

ದಾಸರಹಳ್ಳಿ ವಾರ್ಡ್ ನಂ.15ರಲ್ಲಿನ ಕನ್ನಡ ಕಸ್ತೂರಿ ರಸ್ತೆ, ಕೆ.ಕೆ ರಸ್ತೆ 2ನೇ ಅಡ್ಡರಸ್ತೆ, ಗಣೇಶ ಸಾ ಮಿಲ್ ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳನ್ನು ಡಾಂಬರಿನ ಮುಖಾಂತರ ಮುಚ್ಚುವ ಕಾಮಗಾರಿ ಮುಕ್ತಾಯಗೊಂಡಿರುತ್ತದೆ ಹಾಗೂ 2019-20ನೇ ಸಾಲಿನ ಪಾರ್ಕಿನಲ್ಲಿ ಜಿಮ್ ಸಲಕರಣೆಗಳನ್ನು ಅಳವಡಿಸುವುದು, ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ ಕ್ಯಾಮೆರಾ ಅಳವಡಿಸುವುದು, ಮರು ಡಾಂಬರೀಕರಣ, ಚರಂಡಿ ನಿರ್ವಹಣೆಗೆ ಸಂಬಂಧಪಟ್ಟಂತೆ 06 ಕಾಮಗಾರಿಗಳಿಗೆ ಕಾಮಗಾರಿ ಕಾರ್ಯಾದೇಶ ದೊರೆತಿದ್ದು, ಕಾಮಗಾರಿಗಳು ಪ್ರಾರಂಭವಾಗಿರುತ್ತದೆ ಎಂದು ಸಭೆಯಲ್ಲಿ ಸಹಾಯಕ ಅಭಿಯಂತರರು ತಿಳಿಸಿದರು.

**5. ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ.**

ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ 2020-21ನೇ ಸಾಲಿನಲ್ಲಿ ರೂ.12.50 ಲಕ್ಷಗಳಿಗೆ ಸಾರ್ವಜನಿಕರಿಗೆ ಕುಡಿಯುವ ನೀರಿನ ಅನುಕೂಲಕ್ಕಾಗಿ ಆರ್.ಓ ಪ್ಲಾಂಟ್ ಅಳವಡಿಸಲು ಅನುಮೋದನೆಗೊಂಡಿರುವ ಕಾಮಗಾರಿಗೆ ತುರ್ತಾಗಿ ಸ್ಥಳವನ್ನು ನಿಗಧಿಪಡಿಸಲು ವಾರ್ಡ್ ಸದಸ್ಯರು ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯದ ಬಗ್ಗೆ ತುರ್ತು ಕ್ರಮವಹಿಸಲು ನೋಡೆಲ್ ಅಧಿಕಾರಿ ರವರು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.

6. ವಿದ್ಯುತ್ ಸರಬರಾಜು, ಬೆಸ್ಕಾಂಗೆ ಸಂಬಂಧಿಸಿದ ಬಗ್ಗೆ.

ಶ್ರೀ.ರಾಜು ವಾರ್ಡ್ ಸಮಿತಿ ಸದಸ್ಯರು ರವರು ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಬೀದಿದೀಪಗಳು ಕಾರ್ಯ ನಿರ್ವಹಿಸದಿರುವ ಬಗ್ಗೆ ಹಾಗೂ ಹೊಸದಾಗಿ ಬಲ್ಬ್‌ಗಳನ್ನು ಅಳವಡಿಸುವಂತೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಸಂಬಂಧಪಟ್ಟ ಬಿಬಿಎಂಪಿ ವಿದ್ಯುತ್ ವಿಭಾಗದ ಅಧಿಕಾರಿಗಳು ಸದರಿ ವಿಷಯದ ಬಗ್ಗೆ ಪರಿಶೀಲಿಸಿ, ತುರ್ತು ಕ್ರಮವಹಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

7. ಒಂಟಿಮನೆಗಳ ಬಗ್ಗೆ.

ದಾಸರಹಳ್ಳಿ ವಾರ್ಡ್‌ಗೆ 2020–21ನೇ ಸಾಲಿನ ಆಯವ್ಯಯದಲ್ಲಿ ಒಂಟಿಮನೆ ನಿರ್ಮಾಣ ಯೋಜನೆ ಅಡಿಯಲ್ಲಿ ಎಸ್.ಸಿ/ಎಸ್.ಟಿ ವರ್ಗದ ಫಲಾನುಭವಿಗಳಿಗೆ 05 ಮನೆಗಳು ಮಂಜೂರಾಗಿದ್ದು, ಸದರಿ ಅನುದಾನಕ್ಕೆ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಂಬಂಧ ಕ್ರಮವಹಿಸಲು ನೋಡೆಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.

ಅಂತಿಮವಾಗಿ ನೋಡೆಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು, ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 15, ದಾಸರಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.